**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಮಂಜುನಾಥ ಭಂಡಾರಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಮಂಡಿಸಿರುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

**ಸೂಚನೆ:**

"ಕಾಡನ್ನೂ ಪಟ್ಟಣ ಮಾಡುವ ಪ್ರಯತ್ನ! ಬೈಂದೂರು ಪಟ್ಟಣ ಪಂಚಾಯಿತಿಯಿಂದ ಗ್ರಾಮೀಣ ಪ್ರದೇಶ ಕೈಬಿಡಿ" ಎಂದು ದಿನ ಪತ್ರಿಕೆಯಲ್ಲಿ ವರದಿಯಾಗಿರುವ ಕುರಿತು.

**ಉತ್ತರ:**

ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ ರವರು ಹಾಲಿ ಬೈಂದೂರು ಪಟ್ಟಣ ಪಂಚಾಯಿತಿಯ ವ್ಯಾಪ್ತಿಯಿಂದ ಕೆಲವು ಪ್ರದೇಶಗಳನ್ನು ಕೈಬಿಡಲು ಕೋರಿ ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಿ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಉಡುಪಿ ಜಿಲ್ಲೆಯ ಬೈಂದೂರು ಪಟ್ಟಣ ಪಂಚಾಯತಿಯ ವಿಸ್ತೀರ್ಣ 54.24 ಚದರ ಕಿಲೋ ಮೀಟರ್ ಇದ್ದು, ಅದರಲ್ಲಿನ ಕೆಲವು ಭಾಗ ಭೂಪ್ರದೇಶವನ್ನು ಕೈಬಿಟ್ಟು 26.24 ಚದರ ಕಿಲೋ ಮೀಟರ್ ವಿಸ್ತೀರ್ಣಕ್ಕೆ ಸೀಮಿತಗೊಳಿಸಲು ಸರ್ಕಾರಕ್ಕೆ ಈ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ರೀತಿಯಾದ ನಗರ ಸ್ಥಳೀಯ ಸಂಸ್ಥೆಗಳನ್ನು ರಚಿಸುವ ಇಲ್ಲವೇ ಅವುಗಳ ವ್ಯಾಪ್ತಿಯಿಂದ ಕೆಲವು ಪ್ರದೇಶಗಳನ್ನು ಕೈಬಿಡುವ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್ ಇಲಾಖೆಯು ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಸುವುದು ಹಲವಾರು ಕಾರಣಗಳಿಂದ ಈಗಾಗಲೇ ವಿಳಂಬವಾಗಿದ್ದು, ಮಾನ್ಯ ಉಚ್ಛ ನ್ಯಾಯಾಲಯವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುತ್ತದೆ; ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತಿಸಿದಲ್ಲಿ ಮತ್ತೊಮ್ಮೆ ಚುನಾವಣಾ ಕ್ಷೇತ್ರಗಳನ್ನು ರಚಿಸಬೇಕಾದ ಸಂಭವ ಉಂಟಾಗುತ್ತದೆ. ಇದರಿಂದ ಚುನಾವಣಾ ಪ್ರಕ್ರಿಯೆ ಮತ್ತಷ್ಟು ವಿಳಂಬವಾಗುತ್ತದೆ; ಆದ್ದರಿಂದ, ಇನ್ನು ಮುಂದೆ ಇಂತಹ ಪ್ರಸ್ತಾವನೆಗಳನ್ನು ಸಹಮತಿಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸಬಾರದೆಂದು ತಿಳಿಸಿರುತ್ತದೆ. ಬೈಂದೂರು ಪಟ್ಟಣ ಪಂಚಾಯಿತಿಯ ವ್ಯಾಪ್ತಿಯ ಪ್ರದೇಶಗಳನ್ನು ಕೈಬಿಟ್ಟಲ್ಲಿ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ವ್ಯತಿರಿಕ್ತ ಪರಿಣಾಮ ಉಂಟಾಗುತ್ತದೆ.

ಬೈಂದೂರು ಪಟ್ಟಣ ಪಂಚಾಯಿತಿಯ ವ್ಯಾಪ್ತಿಯಲ್ಲಿ ಚುನಾಯಿತ ಆಡಳಿತ ಮಂಡಳಿಯನ್ನು ಅಸ್ತಿತ್ವಕ್ಕೆ ತರುವುದಕ್ಕಾಗಿ ಈಗಾಗಲೇ ವಾರ್ಡುವಾರು ಮೀಸಲಾತಿಯ ಅಂತಿಮ ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಆದ್ದರಿಂದ, ಈ ಹಂತದಲ್ಲಿ ಕೆಲವು ಪ್ರದೇಶಗಳನ್ನು ಕೈಬಿಡುವ ಸಮರ್ಪಕತೆಯನ್ನು ಮರುಪರಿಶೀಲಿಸಲು ಪೌರಾಡಳಿತ ನಿರ್ದೇಶಕರಿಂದ ಸೂಕ್ತ ಮಾಹಿತಿಯನ್ನು ಕೋರಲಾಗಿರುತ್ತದೆ. ಸೂಕ್ತ ಮಾಹಿತಿ ದೊರೆತ ನಂತರ ಮುಂದಿನ ಕ್ರಮವಹಿಸಲು ಅವಕಾಶವಾಗುತ್ತದೆ.

**ಸಂಖ್ಯೆ:ನಅಇ 59 ಎಲ್‌ಸಿಕ್ಯೂ 2025.**

(ರಹೀಂ ಖಾನ್)

**ಪೌರಾಡಳಿತ ಮತ್ತು ಹಜ್ ಸಚಿವರು**